NOVEMBER 13, 2025

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಬೆಳಗಾವಿ ವಿಧಾನ ಮಂಡಳ ಚಳಿಗಾಲದ ಅಧಿವೇಶನ: ಸಮರ್ಪಕ ನಿರ್ವಹಣೆಗೆ ಉಪಸಮಿತಿಗಳ ರಚನೆ.

- ಕಬ್ಬು ಬೆಳೆಗೆ ಸೂಕ್ತ ದರ ನಿಗದಿಗೊಳಿಸುವಂತೆ ಒತ್ತಾಯಿಸಿ ಮುಂದುವರಿದ ರೈತರ ಪ್ರತಿಭಟನೆ: ಮುಧೋಳ ಪಟ್ಟಣ ಬಂದ್ ಯಶಸ್ವಿ.

- ಸರ್ಕಾರದ ಕ್ರಮಗಳಿಂದಾಗಿ ರಾಜ್ಯದಲ್ಲಿ ಬಾಣಂತಿಯರ ಮರಣ ಪ್ರಮಾಣ ಇಳಿಕೆ–ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.

- ನಾಳೆಯಿಂದ 20 ರವರೆಗೆ ದಾವಣಗೆರೆ ಜಿಲ್ಲಾದ್ಯಂತ 72 ನೇ ಅಖಿಲ ಭಾರತ ಸಹಕಾರ ಸಪ್ತಾಹ.

ಈಗ ವಾರ್ತೆಗಳ ವಿವರ

*******

ಬರುವ ಡಿಸೆಂಬರ್ ತಿಂಗಳಲ್ಲಿ ಬೆಳಗಾವಿ ಸುವರ್ಣ ಸೌಧದಲ್ಲಿ ಜರುಗಲಿರುವ ಚಳಿಗಾಲ ಅಧಿವೇಶನವನ್ನು ಕಳೆದ ಬಾರಿಯಂತೆ ಅಚ್ಚುಕಟ್ಟಾಗಿ ನಡೆಸಲು ಅನುಕೂಲವಾಗುವಂತೆ ಉಪಸಮಿತಿಗಳನ್ನು ರಚಿಸಲಾಗಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋ ʼನ್ ತಿಳಿಸಿದ್ದಾರೆ. ಸುವರ್ಣ ವಿಧಾನಸೌಧದಲ್ಲಿ ಜರುಗಿದ ಚಳಿಗಾಲ ಆಧಿವೇಶನ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಉಪಸಮಿತಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸುವುದರ ಮೂಲಕ ಯಾವುದೇ ಲೋಪಗಳಾಗದಂತೆ ಕಾರ್ಯನಿರ್ವಹಿಸಬೇಕು ಎಂದರು. ಅಧಿವೇಶನಕ್ಕೆ ಆಗಮಿಸುವ ಅಧಿಕಾರಿ, ಸಿಬ್ಬಂದಿಗಳಿಗೆ ಪಾಸ್ ವಿತರಣೆಯನ್ನು ಪೋಲಿಸ್ ಇಲಾಖೆ ಸಮನ್ವಯದೊಂದಿಗೆ ವಿತರಿಸಲು ಕ್ರಮವಹಿಸಬೇಕು. ಅಧಿವೇಶನದ ಸಂದರ್ಭದಲ್ಲಿ ನಡೆಯುವ ಪ್ರತಿಭಟನೆಗಳಿಗಾಗಿ ಸೂಕ್ತ ಸ್ಥಳ ಗುರುತಿಸುವ ಕಾರ್ಯ ಶೀಘ್ರವೆ ಆಗಬೇಕು ಎಂದು ಸೂಚನೆ ನೀಡಿದರು.

*******

ಕಬ್ಬು ಬೆಳೆಗೆ ಸೂಕ್ತ ದರ ನಿಗದಿಗೊಳಿಸುವಂತೆ ಒತ್ತಾಯಿಸಿ ರೈತರ ಪ್ರತಿಭಟನೆ ಮುಂದುವರಿದಿದ್ದು, ಬಾಗಲಕೋಟೆ ಜಿಲ್ಲೆಯ ಮುಧೋಳ ಪಟ್ಟಣ ಬಂದ್ ಮಾಡಿ ನಿನ್ನೆ ರೈತರು ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿ ಸಂಗಪ್ಪ ನೇತೃತ್ವದಲ್ಲಿ ನಡೆದ ಸಭೆ ವಿಫಲವಾದ ಹಿನ್ನೆಲೆ, ರೈತರು ಬೆಳಗ್ಗೆಯಿಂದಲೇ ವಿವಿಧ ಕಡೆಗಳಲ್ಲಿ ಪ್ರತಿಭಟನೆ ನಡೆಸಿ, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿ ಟನ್ ಕಬ್ಬಿಗೆ 3 ಸಾವಿರದ 500 ರೂಪಾಯಿ ದರ ನಿಗದಿಪಡಿಸಬೇಕು ಎಂದು ಒತ್ತಾಯಿಸುತ್ತಿರುವ ರೈತರು ಶಿರೋಳ ಬಳಿ ರಸ್ತೆ ತಡೆ ನಡೆಸಿದರು. ಇದರಿಂದಾಗಿ ಕೆಲ ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು. ಕಬ್ಬು ಬೆಳೆಗೆ ಸೂಕ್ತ ದರ ನಿಗದಿಪಡಿಸುವವರೆಗೂ ರೈತರು ಹೋರಾಟ ಮುಂದುವರೆಯಲಿದೆ ಎಂದು ರೈತ ಮುಖಂಡ ಈರಪ್ಪ ಹಂಚಿನಾಳ ಹೇಳಿದರು.

*******

ಸರ್ಕಾರ ಕೈಗೊಂಡಿರುವ ಕ್ರಮಗಳಿಂದಾಗಿ ರಾಜ್ಯದಲ್ಲಿ ಬಾಣಂತಿಯರ ಮರಣ ಪ್ರಮಾಣ ಶೇಕಡ 24 ರಷ್ಟು ಇಳಿಕೆಯಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, 2024 ರ ಜನವರಿ ತಿಂಗಳಿನಿಂದ ಅಕ್ಟೋಬರ್‌ವರೆಗೆ 483 ಬಾಣಂತಿ ಮರಣ ಪ್ರಕರಣಗಳು ದಾಖಲಾಗಿದ್ದವು. ಆದರೆ, ಈ ವರ್ಷದಲ್ಲಿ ಜನವರಿಯಿಂದ ಅಕ್ಟೋಬರ್‌ವರೆಗೆ 366 ಬಾಣಂತಿ ಮರಣ ಪ್ರಕರಣಗಳು ದಾಖಲಾಗಿವೆ. ಬಾಣಂತಿಯರ ಆರೋಗ್ಯ ಸಂರಕ್ಷಣೆಗೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ. ಪ್ರತಿಯೊಬ್ಬ ತಾಯಿ ಮತ್ತು ಮಗುವಿನ ಉತ್ತಮ ಆರೋಗ್ಯಕ್ಕೆ ಹಾಗೂ ಸುರಕ್ಷತೆಗೆ ರಾಜ್ಯ ಸರ್ಕಾರ ಆದ್ಯತೆ ನೀಡಿದೆ. ಆರೋಗ್ಯ ಕ್ಷೇತ್ರದಲ್ಲಿನ ಸುಧಾರಣೆ, ತಜ್ಞ ವೈದ್ಯರ ನೇಮಕಾತಿಯಿಂದಾಗಿ ಬಾಣಂತಿಯರು ಹಾಗೂ ಮಕ್ಕಳ ಮರಣ ಪ್ರಮಾಣದಲ್ಲಿ ಇಳಿಕೆಯಾಗಿದೆ ಎಂದು ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ.

*******

ಐಟಿ, ಬಿಟಿಕಂಪನಿಗಳನ್ನು ಜಿಲ್ಲೆಗೆ ಆಹ್ವಾನಿಸುವ ಮೂಲಕ ಜಿಲ್ಲೆಯ ಯುವ ಜನರಿಗೆ ಉದ್ಯೋಗ ದೊರಕಿಸಿಕೊಡುವ ಪ್ರಯತ್ನ ನಡೆದಿದೆ ಎಂದು ದಾವಣಗೆರೆ ಸಂಸದೆ ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ನಿನ್ನೆ ವಿವಿಧ ಐಟಿ, ಬಿಟಿ ಕಂಪನಿಗಳ ಸಿಇಓ, ಎಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ಟೆಕ್‌ರೈಸ್ ಸಭೆ ನಡೆಸಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶ, ವಿದೇಶದ ಕಂಪನಿಗಳೊಂದಿಗೆ ಮಾತುಕತೆ ನಡೆಸಿದ ಫಲವಾಗಿ ಮುಂದಿನ 60 ದಿನಗಳಲ್ಲಿ 10 ಕ್ಕೂ ಹೆಚ್ಚು ಕಂಪನಿಗಳು ಆಗಮಿಸುವ ನಿರೀಕ್ಷೆ ಇದೆ ಎಂದರು. ಐಟಿ, ಬಿಟಿ ಕಂಪನಿಗಳಿಗೆ ಬೇಕಾದ ಮೂಲಭೂತ ಸೌಕರ್ಯ ಸೇರಿದಂತೆ ಸ್ಥಳಾವಕಾಶ ಒದಗಿಸಿಕೊಡಲಾಗುತ್ತದೆ. ಐಟಿ, ಬಿಟಿ ಕಂಪನಿಗಳನ್ನು ಸ್ಥಾಪನೆ ಮಾಡಲು ರಚಿಸಲಾದ ದಾವಣಗೆರೆ ವಿಷನ್ ಗ್ರೂಪ್ ಬೆಂಗಳೂರಿನ ಪ್ರತಿಷ್ಠಿತ ಕಂಪನಿಗಳು ಸೇರಿದಂತೆ ವಿವಿಧ ರಾಜ್ಯಗಳಿಗೆ ಈ ತಂಡ ಭೇಟಿ ನೀಡಿ, ಕಂಪನಿಗಳೊಂದಿಗೆ ಮಾತುಕತೆ ನಡೆಸಿದೆ. ಸ್ಥಳೀಯವಾಗಿ ಕಂಪನಿಗಳನ್ನು ಸ್ಥಾಪನೆ ಮಾಡುವುದರಿಂದ ಉದ್ಯೋಗಾವಕಾಶಗಳು ದೊರೆಯಲಿವೆ ಎಂದು ಅವರು ಹೇಳಿದರು.

*******

ಕಾಡಿನಿಂದ ವನ್ಯಜೀವಿಗಳು ನಾಡಿಗೆ ಬಂದ ಸಂದರ್ಭಗಳಲ್ಲಿ ಸ್ಥಳೀಯರು 1926 ಸಂಖ್ಯೆಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ದೂರು ದಾಖಲಾಗುತ್ತಿದ್ದಂತೆಯೇ ಅದು ಸಂಬಂಧಿತ ವಲಯ ಕಚೇರಿಗೆ ರವಾನೆಯಾಗುತ್ತದೆ ಮತ್ತು ತುರ್ತಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿದ್ದಾರೆ. ಈ ವ್ಯವಸ್ಥೆಯ ಕಾರ್ಯಕ್ಷಮತೆಯನ್ನು ಪಿಸಿಸಿಎಫ್ ಹಾಗೂ ಎಪಿಸಿಸಿಎಫ್ ಮಟ್ಟದಲ್ಲಿ ಮೇಲ್ವಿಚಾರಣೆ ಮಾಡಲಾಗುತ್ತಿದ್ದು, ಅಧಿಕಾರಿಗಳು ತಕ್ಷಣ ಸ್ಪಂದಿಸುವಂತೆ ನಿರ್ದೇಶಿಸಲಾಗಿದೆ. ಈ ಹೊಸ ಕ್ರಮದಿಂದಾಗಿ ಜನರ ಸುರಕ್ಷತೆ ಮತ್ತು ವನ್ಯಜೀವಿಗಳ ಸಂರಕ್ಷಣೆಗೆ ಮತ್ತ ಷ್ಟ ಬಲ ಸಿಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

*******

ಕೇಂದ್ರ ಬಂದರು, ಹಡಗು ಮತ್ತು ಜಲಸಾರಿಗೆ ಸಚಿವ ಸರ್ಬಾನಂದ ಸೋನೋವಾಲ್ ನಿನ್ನೆ ಸಂಜೆ ಮಂಗಳೂರಿಗೆ ಆಗಮಿಸಿದರು. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸಚಿವರನ್ನು ಸ್ವಾಗತಿಸಿದರು. ಸಚಿವ ಸೋನೋವಾಲ್ ಅವರು ಇಂದು ಮಂಗಳೂರು ಮರೈನ್ ಕಾಲೇಜ್ ಆಂಡ್ ಟೆಕ್ನಾಲಜಿ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದು, ನವೀಕೃತ ಕ್ಯಾಂಪಸ್‌ನ್ನು ಉದ್ಘಾಟಿಸಲಿದ್ದಾರೆ. ಮಧ್ಯಾಹ್ನ 2.30ಕ್ಕೆ ನವ ಮಂಗಳೂರು ಬಂದರು ಪ್ರಾಧಿಕಾರದ 50 ನೆಯ ವ ರ್ಷಾಚರಣೆಯ ಸಂಭ್ರಮ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ಸಚಿವರ ಉಪಸ್ಥಿತಿಯಲ್ಲಿ ನವ ಮಂಗಳೂರು ಬಂದರಿನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ 1500 ಕೋಟಿ ರೂಪಾಯಿಗಳ ವಿವಿಧ 20 ಯೋಜನೆಗಳಿಗೆ ಚಾಲನೆ ದೊರೆಯಲಿದೆ.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–56 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ನಾಳೆಯಿಂದ 20 ರವರೆಗೆ ದಾವಣಗೆರೆ ಜಿಲ್ಲಾದ್ಯಂತ 72 ನೇ ಅಖಿಲ ಭಾರತ ಸಹಕಾರ ಸಪ್ತಾಹ ಹಮ್ಮಿಕೊಳ್ಳಲಾಗಿದ್ದು, 'ಆತ್ಮ ನಿರ್ಭರ ಭಾರತ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳು' ಎನ್ನುವುದು ಈ ವರ್ಷದ ಘೋಷವಾಕ್ಯವಾಗಿದೆ. ಸಪ್ತಾಹದ ಆಶಯ, ಉದ್ದೇಶ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿರಿಗೆರೆ ರಾಜಣ್ಣ ಅವರು..

ಧ್ವನಿ–ಸಿರಿಗೆರೆ ರಾಜಣ್ಣ–33 ಸೆಕೆಂಡ್ಸ್

*******

ತುಂಗಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಬೆಳೆಗೂ ನೀರು ನೀಡಬೇಕು ಎಂದು ಆಗ್ರಹಿಸಿ ರಾಜ್ಯ ರೈತ ಸಂಘದ ಅಧ್ಯಕ್ಷ ಮಾಧವ ರೆಡ್ಡಿ ನೇತೃತ್ವದಲ್ಲಿ ಸಿರುಗುಪ್ಪ ತಾಲೂಕಿನ ಕರೂರು ಗ್ರಾಮದಿಂದ ಟಿಬಿ ಡ್ಯಾಂವರೆಗೆ ಪಾದಯಾತ್ರೆ ಆರಂಭಿಸಲಾಗಿದೆ.

ಕರೂರಿನಿಂದ ಆರಂಭಗೊಂಡಿರುವ ಪಾದಯಾತ್ರೆ ಕುರುಗೋಡು, ಎಮ್ಮಿಗನೂರು, ಕಂಪ್ಲಿ, ಕಮಲಾಪುರ ಮೂಲಕ ಸಾಗಿ ಇದೇ 17ಕ್ಕೆ ತುಂಗಭದ್ರಾ ಜಲಾಶಯದ ಎದುರು ಸೇರಲಿದ್ದು, ನಂತರ ಅನಿರ್ದಿ ಷ್ಟಾವಧಿ ಧರಣಿ ನಡೆಯಲಿದೆ.

*******

ಮಕ್ಕಳ ದಿನಾಚಾರಣೆಯ ಪ್ರಯುಕ್ತ ಗದಗ ಜಿಲ್ಲಾದ್ಯಂತ ಏಕಕಾಲದಲ್ಲಿ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಪೋ ಕ-ಶಿಕ್ಷಕರ ಮಹಾಸಭೆ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ತಿಳಿಸಿದ್ದಾರೆ. ಈ ಕುರಿತು ಅವರು ಪ್ರಕಟನೆ ಬಿಡುಗಡೆ ಮಾಡಿರುವ ಅವರು, ನಾಳೆ ಬೆಳಿಗ್ಗೆ 11 ಗಂಟೆಗೆ ಸಭೆ ನಡೆಯಲಿದ್ದು, ಮಕ್ಕಳ ಕಲಿಕೆಯು ಶಾಲೆ, ಮನೆ ಮತ್ತು ಸಮಾಜಗಳ ನಡುವೆ ನಿರಂತರ ಸಂಪರ್ಕ ಕಲ್ಪಿಸುತ್ತದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪೋ ಕರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಅವರನ್ನು ಈ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶ ಎಂದು ತಿಳಿಸಿದ್ದಾರೆ. ಪೋ ಕರು, ಶಿಕ್ಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸುವುದು ಸಭೆಗಳ ಉದ್ದೇಶ ಎಂದಿದ್ದಾರೆ.

*******

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ವಿವಿಧ ಕಾರಣಗಳಿಂದಾಗಿ ಭಾಗವಹಿಸಲು ಸಾಧ್ಯವಾಗದೇ ಇರುವವರಿಗೆ ಅವಕಾಶ ನೀಡುವ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಅವಧಿಯನ್ನು ಇದೇ 30 ರವರೆಗೆ ವಿಸ್ತರಿಸಲಾಗಿದೆ. ಸಮೀಕ್ಷೆಯಲ್ಲಿ ಇದುವರೆಗೂ ಪಾಲ್ಗೊಳ್ಳದೇ ಇರುವವರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿರುವ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಕಾರ್ಯದರ್ಶಿ ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ : 8050770004 ಸಂಪರ್ಕಿಸುವಂತೆ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಬೆಳಗಾವಿ ವಿಧಾನ ಮಂಡಳ ಚಳಿಗಾಲದ ಅಧಿವೇಶನ: ಸಮರ್ಪಕ ನಿರ್ವಹಣೆಗೆ ಉಪಸಮಿತಿಗಳ ರಚನೆ.
- ಕಬ್ಬು ಬೆಳೆಗೆ ಸೂಕ್ತ ದರ ನಿಗದಿಗೊಳಿಸುವಂತೆ ಒತ್ತಾಯಿಸಿ ಮುಂದುವರಿದ ರೈತರ ಪ್ರತಿಭಟನೆ: ಮುಧೋಳ ಪಟ್ಟಣ ಬಂದ್ ಯಶಸ್ವಿ.
- ಸರ್ಕಾರದ ಕ್ರಮಗಳಿಂದಾಗಿ ರಾಜ್ಯದಲ್ಲಿ ಬಾಣಂತಿಯರ ಮರಣ ಪ್ರಮಾಣ ಇಳಿಕೆ-ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.

- ನಾಳೆಯಿಂದ 20 ರವರೆಗೆ ದಾವಣಗೆರೆ ಜಿಲ್ಲಾದ್ಯಂತ 72 ನೇ ಅಖಿಲ ಭಾರತ ಸಹಕಾರ ಸಪ್ತಾಹ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********